# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 574
ಸದಸ್ಯರ ಹೆಸರು : ಡಾ: ತಳವಾರ್ ಸಾಬಣ್ಣ
ಉತ್ತರಿಸುವ ದಿನಾಂಕ : 20.02.2024
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ಪೌರಸಭೆಗಳ ಅಧಿನಿಯಮ 2020ರಲ್ಲಿನ ತಿದ್ದುಪಡಿ ಪ್ರಕಾರ ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರ ಸಭೆಗಳಲ್ಲಿ ಹೊರೆಗುಂಪು, ಏರಿಯಾ ಸಭಾ ಮತ್ತು ವಾರ್ಡ್ ಸಮಿತಿಗಳ ರಚನೆ ಮಾಡದಿರಲು ಕಾರಣಗಳೇನು; (ವಿವರ ನೀಡುವುದು) | ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ಅಧಿನಿಯಮ, 2020ನ್ನು ರಚಿಸುವ ಮೂಲಕ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಸೆಕ್ಷನ್-80ಕ್ಕೆ ಕೆಲವು ಸೇರ್ಪಡೆಗಳನ್ನು ಮಾಡಿ, ಪ್ರದೇಶ ಸಭಾ, ನೆರೆಹೊರೆ ಗುಂಪು ರಚನೆ, ವಾರ್ಡ್ ಸಮಿತಿ ರಚನೆ ಮತ್ತು ಪ್ರಕಾರ್ಯಗಳ ಕುರಿತು ವಿವರಿಸಲಾಗಿರುತ್ತದೆ. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರು ಈ ಕುರಿತು ಅಗತ್ಯ ಕ್ರಮವಹಿಸುವಂತೆ ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಪತ್ರವನ್ನು ಬರೆದು ಸಮಿತಿಯ ರಚನೆಗೆ ಅಗತ್ಯ ಕ್ರಮವಹಿಸಲು ಕೋರಿದ್ದು, ಅದರಂತೆ ಪ್ರದೇಶ ಸಭಾ, ನೆರೆಹೊರೆ ಗುಂಪು ರಚನೆ, ವಾರ್ಡ್ ಸಮಿತಿ ರಚನೆಗೆ ಆಯಾ ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆಗಳಲ್ಲಿ ಕ್ರಮವಹಿಸಲಾಗುತ್ತದೆ. |
| (ಆ) | ಇದಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸುವುದು ಯಾವಾಗ; ಮೂರು ವರ್ಷ ಕಳೆದರು ವಿಳಂಭವಾಗಲು ಕಾರಣವೇನು; | |
| (ಇ) | 214 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮೇ-2023 ರಲ್ಲಿಯೇ ಅವಧಿ ಮುಗಿದ್ದರು ಇನ್ನು ಅಧ್ಯಕ್ಷರ ನೇಮಕ ಪ್ರಕ್ರಿಯೆ ಕೈಗೊಳ್ಳದಿರಲು ಕಾರಣಗಳೇನು; (ವಿವರ ನೀಡುವುದು) | ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅಧ್ಯಕ್ಷ/ಉಪಾಧ್ಯಕ್ಷ ಸ್ಥಾನಗಳ ಮೀಸಲಾತಿಗೆ ಸಂಬಂಧಿಸಿದಂತೆ ಈ ಕೆಳಕಂಡ ನ್ಯಾಯಾಲಯ ಪ್ರಕರಣಗಳು ಬಾಕಿ ಇರುತ್ತವೆ:<br><br>1) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರಲ್ಲಿ ದಿನಾಂಕ:15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ:17.12.2021ರಂದು ನೀಡಿರುವ ಆದೇಶದನ್ವಯ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ನಿವೃತ್ತ ನ್ಯಾಯಾಧೀಶರಾದ ಡಾ॥ ಜಸ್ಟೀಸ್ ಕೆ.ಭಕ್ತವತ್ಸಲ ರವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿರುತ್ತದೆ. ಪ್ರಸ್ತುತ ಆಯೋಗವು ಅಂತಿಮ ವರದಿಯನ್ನು ನೀಡಿದ್ದು, ಈ ವರದಿಯನ್ನು ದಿನಾಂಕ:05.10.2023ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ನಿರ್ವಹಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಗೆ |
| (ಈ) | ಇಲ್ಲಿಯವರೆಗೆ ಕೇವಲ ಆಡಳಿತಾಧಿಕಾರಿಗಳು ಅಧಿಕಾರ ನಡೆಸುತ್ತಿರುವುದು ಸರಿಯೇ; | |
| (ಉ) | ಇದರಿಂದ ಪೌರಾಡಳಿತ ಚಟುವಟಿಕೆಗಳಲ್ಲಿ ನಾಗರೀಕರ ಪಾಲ್ಗೊಳ್ಳುವಿಕೆ ತಡೆದಂತಾಗುವುದಿಲ್ಲವೇ ಇದು ಪ್ರಜಾಪ್ರಭುತ್ವದ ಮೂಲ ಸಿದ್ಧಾಂತವನ್ನು ಜನರಿಂದ ಕಸಿದುಕೊಂಡಂತಲ್ಲವೆ? | |

Scanned with OKEN Scanner

| | | |
|---|---|---|
| | | ಹಸ್ತಾಂತರಿಸಲು ಅನುಮೋದನೆ ನೀಡಿರುತ್ತದೆ. ಆದ್ದರಿಂದ ನಗರಾಭಿವೃದ್ಧಿ ಇಲಾಖೆಯಿಂದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಹಸ್ತಾಂತರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಆದರೆ ಈ ಮಧ್ಯೆ ಮಾನ್ಯ ಮುಖ್ಯಮಂತ್ರಿಗಳು "ಈಗಿರುವ ಆಡಳಿತಾತ್ಮಕ ವ್ಯವಸ್ಥೆಯನ್ನು ಮುಂದುವರೆಸಲು ಸಚಿವ ಸಂಪುಟದ ಮುಂದೆ ವಿಷಯವನ್ನು ತರಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೂಚಿಸುವುದು" ಎಂದು ನಿರ್ದೇಶಿಸಿದ ಹಿನ್ನಲೆಯಲ್ಲಿ ವಿಷಯವನ್ನು ಸಚಿವ ಸಂಪುಟದ ಮುಂದೆ ಮಂಡಿಸಲು ಅಗತ್ಯ ಕ್ರಮವಹಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯನ್ನು ದಿನಾಂಕ:26.12.2023ರ ಅನಧಿಕೃತ ಟಿಪ್ಪಣಿಯಲ್ಲಿ ಕೋರಲಾಗಿದೆ. ಸದರಿ ಇಲಾಖೆಯಿಂದ ಆದೇಶದ ಪ್ರತಿಯನ್ನು ನಿರೀಕ್ಷಿಸಲಾಗಿರುತ್ತದೆ.<br><br>2) ರಾಜ್ಯದಲ್ಲಿನ ಕೆಲವು ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿದ್ದು, ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್‌ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡವಿಟ್ ದಾಖಲಿಸಲಾಗಿರುತ್ತದೆ. ಪ್ರಕರಣವು ದಿನಾಂಕ:06.03.2024ರಂದು ವಿಚಾರಣೆಗೆ ಬರಲಿದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಪು ಬಂದ ನಂತರ ಈ ಬಗ್ಗೆ ಕ್ರಮವಹಿಸಬೇಕಿರುತ್ತದೆ.<br><br>ಅಧ್ಯಕ/ಉಪಾಧ್ಯಕ್ಷ ಸ್ಥಾನದ ಅವಧಿ ಮುಕ್ತಾಯಗೊಂಡಿರುವ ನಗರ ಸ್ಥಳೀಯ ಸಂಸ್ಥೆಗಳ ಆಡಳಿತ ಹಿತದೃಷ್ಟಿಯಿಂದ ಆಡಳಿತಾಧಿಕಾರಿಗಳನ್ನು ನೇಮಕ ಮಾಡಿರುವುದರಿಂದ ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ. |

**ಸಂಖ್ಯೆ:** ನಅಇ 16 ಎಲ್‌ಸಿಕ್ಯೂ 2024

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು

Scanned with OKEN Scanner